# ಕರ್ನಾಟಕ ವಿಧಾನಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 801 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಭೀಮಾರಾವ್ ಬಸವರಾಜ ಪಾಟೀಲ್.<br>(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 13.03.2025 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಸರ್ಕಾರ ಕೈಗೊಂಡ ಕ್ರಮವೇನು; (ಮಾಹಿತಿ ನೀಡುವುದು) | • ಆಗಸ್ಟ್-01ರ ಡಾ:ಮ.ನಿ.ಪ್ರ ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧೀನದಲ್ಲಿರುವ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ವತಿಯಿಂದ "ವ್ಯಸನ ಮುಕ್ತ ದಿನಾಚರಣೆ"ಯನ್ನಾಗಿ ಪ್ರತಿ ವರ್ಷ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಆಚರಿಸಲಾಗುತ್ತಿದ್ದು, ಈ ಸಂಬಂಧ ಅನುದಾನವನ್ನು ಬಿಡುಗಡೆ ಮಾಡಿ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ.<br>• ವಿಶ್ವ ವಿಖ್ಯಾತ ಮೈಸೂರು ದಸರಾ ವಸ್ತು ಪ್ರದರ್ಶನದಲ್ಲಿ ಇಲಾಖೆಯ ವತಿಯಿಂದ ತೆರೆಯಲಾಗುವ ಜನಜಾಗೃತಿ ಮಳಿಗೆಯಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ತಿಳಿವಳಿಕೆ ಮೂಡಿಸಲಾಗುತ್ತಿದೆ.<br>• ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ವತಿಯಿಂದ ಮದ್ಯ ಮತ್ತು ಮಾದಕ ವಸ್ತುಗಳ ಜನಜಾಗೃತಿ ಮೂಡಿಸುವ ರೇಡಿಯೋ ಜಿಂಗಲ್ಸ್‌ಗಳನ್ನು ತಯಾರಿಸಿ ಆಕಾಶವಾಣಿ ಮೂಲಕ ಪ್ರಸಾರ ಮಾಡಲಾಗುತ್ತಿದೆ.<br>• ಸದರಿ ಮಂಡಳಿ ವತಿಯಿಂದ "ಮದ್ಯಪಾನ ಆರೋಗ್ಯಕ್ಕೆ ಮಾರಕ ಹೇಗೆ? ಪರಿಹಾರ ಹೇಗೆ?" ಎಂಬ ಬಗ್ಗೆ ಕಿರುಪುಸ್ತಕಗಳನ್ನು ಮುದ್ರಿಸಿ ಶಾಲಾ-ಕಾಲೇಜು, ಸಂಘ ಸಂಸ್ಥೆಗಳಿಗೆ ಹಾಗೂ ವಸ್ತು ಪ್ರದರ್ಶನಗಳಲ್ಲಿ ಸಾರ್ವಜನಿಕರಿಗೆ ವಿತರಿಸಲಾಗುತ್ತಿದೆ.<br>• ಬೆಳ್ತಂಗಡಿ ತಾಲ್ಲೂಕಿನ ಅಖಿಲ ಕರ್ನಾಟಕ ಜನಜಾಗೃತಿ ಟ್ರಸ್ಟ್ (ರಿ) ವತಿಯಿಂದ ಮದ್ಯ ಮತ್ತು ಮಾದಕ ವಸ್ತುಗಳ ಕುರಿತು ಜಾಗೃತಿ ಕಾರ್ಯಕ್ರಮ ಸೇರಿದಂತೆ ಮದ್ಯ ಮತ್ತು ಮಾದಕ ವಸ್ತು ದುಷ್ಚಟಗಳಿಂದ ಪೀಡಿತರನ್ನು ಹೊರತರಲು ವಿಶೇಷ ಶಿಬಿರಗಳನ್ನು ನಡೆಸಲು ಆರ್ಥಿಕ ನೆರವು ನೀಡಲಾಗಿದೆ.<br>• ಅಕ್ಟೋಬರ್ 02 ರಂದು ಮಹಾತ್ಮ ಗಾಂಧಿ ಜಯಂತಿಯಂದು ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಸಹಯೋಗದಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳೊಂದಿಗೆ ಜಾಥಾ ಮತ್ತು ಕಾರ್ಯಕ್ರಮವನ್ನು ಏರ್ಪಡಿಸಲಾಗುತ್ತಿದೆ.<br>• ಸಾರ್ವಜನಿಕ ಸ್ಥಳಗಳಲ್ಲಿ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ವತಿಯಿಂದ ರಾಜ್ಯಾದ್ಯಂತ ಸ್ಥಾಪಿಸಿರುವ ಹೆದ್ದಾರಿ ಫಲಕಗಳನ್ನು ನವೀಕರಿಸಿ ಸಾರ್ವಜನಿಕರು ಮತ್ತು ವಿದ್ಯಾರ್ಥಿಗಳಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ಬಗ್ಗೆ ಜನ ಜಾಗೃತಿ ಮೂಡಿಸಲಾಗುತ್ತಿದೆ. |

| | | |
|---|---|---|
| | | • ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಕಲಾ ತಂಡಗಳಿಂದ 03 ಜಿಲ್ಲೆಗಳಲ್ಲಿ (ಮೈಸೂರು, ಶಿವಮೊಗ್ಗ, ಹಾಗೂ ಕೊಡಗು) ಒಟ್ಟು 60 ಬೀದಿ ನಾಟಕ ಕಾರ್ಯಕ್ರಮವನ್ನು 2024-25ನೇ ಸಾಲಿನಲ್ಲಿ ಹಮ್ಮಿಕೊಳ್ಳಲಾಗಿದೆ.<br>• ದಿನಾಂಕ:17-02-2025 ರಿಂದ ದಿನಾಂಕ:03-03-2025 ರ ಅವಧಿಯಲ್ಲಿ ತುಮಕೂರು ಶ್ರೀ ಸಿದ್ದಗಂಗಾ ಕೃಷಿ ಮತ್ತು ಕೈಗಾರಿಕೆ ವಸ್ತು ಪ್ರದರ್ಶನದಲ್ಲಿ ಮಳಿಗೆಯನ್ನು ತೆರೆದು ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ತಿಳುವಳಿಕೆ ಮೂಡಿಸಲಾಗಿದೆ<br>• ರಾಜ್ಯದ ಸರ್ಕಾರಿ ಶಾಲಾ ಕಾಲೇಜು ಆವರಣದಲ್ಲಿ ವಿದ್ಯಾರ್ಥಿಗಳಿಗೆ ಮದ್ಯ ಮತ್ತು ಮಾದಕ ವಸ್ತುಗಳ ಬಗ್ಗೆ ಜನ ಜಾಗೃತಿ ಮೂಡಿಸುವ ಸಲುವಾಗಿ ಮಂಡಳಿ ವತಿಯಿಂದ ಜನಜಾಗೃತಿ ಫಲಕಗಳ ಅನುಷ್ಠಾನ ಮತ್ತು ನವೀಕರಣ ಮಾಡಲಾಗಿದೆ. |
| ಆ) | ಕಳೆದ 2 ವರ್ಷದಲ್ಲಿ ಶಾಲಾ ಕಾಲೇಜಿನಲ್ಲಿ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಎಷ್ಟು ವಿಚಾರ ಸಂಕಿರಣ ಕಾರ್ಯಕ್ರಮ ಕೈಗೊಳ್ಳಲಾಗಿದೆ: (ಮಾಹಿತಿ ನೀಡುವುದು) | ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು ಸಹಯೋಗದಲ್ಲಿ ಕಳೆದ ಎರಡು ವರ್ಷಗಳಲ್ಲಿ ರಾಜ್ಯದ 31 ಜಿಲ್ಲೆಗಳಲ್ಲಿ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಒಟ್ಟು 38 ವಿಚಾರ ಸಂಕಿರಣಗಳನ್ನು ಏರ್ಪಡಿಸಿ ಜಾಗೃತಿ ಮೂಡಿಸಲಾಗುತ್ತಿದೆ. |
| ಇ) | ಶಾಲಾ ಕಾಲೇಜಿನಲ್ಲಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲು ಹೊಸದಾಗಿ ಯಾವ ಯಾವ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದೆ: (ಮಾಹಿತಿ ನೀಡುವುದು) | ರಾಜ್ಯದ ಎಲ್ಲಾ ಜಿಲ್ಲೆಗಳ ಸರ್ಕಾರಿ ಶಾಲಾ ಕಾಲೇಜು ಆವರಣದಲ್ಲಿ ಮಂಡಳಿ ವತಿಯಿಂದ ಜನಜಾಗೃತಿ ಫಲಕಗಳ ಅನುಷ್ಠಾನ ಮತ್ತು ನವೀಕರಣ ಹಾಗೂ ವಿಚಾರ ಸಂಕಿರಣಗಳ ಮೂಲಕ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. |
| ಈ) | ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಬೀದಿ ನಾಟಕ ಕಾರ್ಯಕ್ರಮ ಸಾಕ್ಷ್ಯಚಿತ್ರ ತಯಾರಿಸಿ ವಿದ್ಯುನ್ಮಾನ ಮಾಧ್ಯಮಗಳಲ್ಲಿ ನಾಟಕಗಳಲ್ಲಿ ರೇಡಿಯೋಗಳಲ್ಲಿ ಕಳೆದ 2 ವರ್ಷದಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಎಷ್ಟು ಕಾರ್ಯಕ್ರಮಗಳಾಗಿವೆ? (ಮಾಹಿತಿ ನೀಡುವುದು) | ಕಳೆದ ಎರಡು ವರ್ಷಗಳಲ್ಲಿ ರಾಜ್ಯದ 06 ಜಿಲ್ಲೆಗಳ(ಮೈಸೂರು, ಶಿವಮೊಗ್ಗ, ಕೊಡಗು, ಹಾಸನ, ಚಿಕ್ಕಮಗಳೂರು, ಚಿತ್ರದುರ್ಗ) ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಕಲಾ ತಂಡಗಳಿಂದ ಒಟ್ಟು 120 ಬೀದಿ ನಾಟಕಗಳನ್ನು ಏರ್ಪಡಿಸಲಾಗಿದೆ ಹಾಗೂ ಸಾಕ್ಷ್ಯ ಚಿತ್ರ ತಯಾರಿಸಿ ದೂರದರ್ಶನ ಹಾಗೂ ಆಕಾಶವಾಣಿ ಮೂಲಕ ಒಟ್ಟು 72 ದಿನ ಪ್ರಸಾರ ಮಾಡಲಾಗಿದೆ. |

**ಸಂ: ಕೆಸಿಐ-ಪಿಐಪಿ/72/2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ